**ಆ) ವಿಷಯ: ಮೈಸೂರು ಮಧ್ಯಭಾಗದಲ್ಲಿ ಮಾರುಕಟ್ಟೆಯನ್ನು ಮುಂದುವರಿಸುತ್ತಿರುವ ಬಗ್ಗೆ.**

ಶ್ರೀ ಎ.ಎಸ್.ಗುರುಸ್ವಾಮಿ: ಮಾನ್ಯ ಸಭಾಧ್ಯಕ್ಷರೇ, ಇದು ನನ್ನ ಕ್ಷೇತ್ರಕ್ಕೆ ಸಂಬಂಧಪಟ್ಟಂತಹ ಸಮಸ್ಯೆ ಮತ್ತು ದುರಂತ. ಮೈಸೂರು ನಗರದ ಬಂಡೀಪಾಳ್ಯದಲ್ಲಿ ಸುಸಜ್ಜಿತ ಮಾರುಕಟ್ಟೆ ಇದ್ದರೂ ಸಹ ಮೈಸೂರು ನಗರದ ಮಧ್ಯಭಾಗದಲ್ಲಿ ಮಾರುಕಟ್ಟೆಯನ್ನು ಮುಂದುವರೆಸಿಕೊಂಡು ಹೋಗಿ ಅಲ್ಲಿ ಎಲ್ಲಿಯೂ ಇಲ್ಲದಂಥ ಟ್ರಾಫಿಕ್ ಜಾಮ್ ಆಗಿ ಅನೇಕ ಸಾವುಗಳಾಗಿವೆ.

ಶ್ರೀ ಎ.ರಾಮದಾಸ್: ಮಾನ್ಯ ಗುರುಸ್ವಾಮಿಯವರೇ, ಇಲ್ಲಿ ಕೃಷಿಮಂತ್ರಿಗಳು ಇಲ್ಲ. ನೀವು ಯಾರ ಗಮನವನ್ನು ಸೆಳೆಯುತ್ತಿದ್ದೀರಿ?

ಶ್ರೀ ಆರ್.ವಿ.ದೇಶಪಾಂಡೆ: ಅವರು ಆ ಸದನದಲ್ಲಿ ಇದ್ದಾರೆ.

ಶ್ರೀ ಅಪ್ಪಾಜಿ ಎಸ್.ನಾಡಗೌಡ: ಮಾನ್ಯ ಕೃಷಿ ಸಚಿವರು ಮೇಲ್ಮನೆಯಲ್ಲಿ ಉತ್ತರ ಕೊಡುತ್ತಿದ್ದಾರೆ. ಆದ್ದರಿಂದ ಇದನ್ನು ಆಮೇಲೆ ತೆಗೆದುಕೊಳ್ಳಬೇಕೆಂದು ನಾನು ಹೇಳುತ್ತೇನೆ.

ಅಧ್ಯಕ್ಷರು: ಮಾನ್ಯ ಸಚಿವರು ಆ ಸದನದಲ್ಲಿ ಇದ್ದಾರಂತೆ. ಇದನ್ನು ಆಮೇಲೆ ತೆಗೆದುಕೊಳ್ಳೋಣ. ಮುಂದಿನ ಗಮನ ಸೆಳೆಯುವ ಸೂಚನೆ ಶ್ರೀ ಜಗದೀಶ ಶೆಟ್ಟರ್ ಅವರದ್ದು.

ಶ್ರೀ ಜಗದೀಶ ಶೆಟ್ಟರ್: ಇಲ್ಲಿ ಮಾನ್ಯ ಮುಖ್ಯಮಂತ್ರಿಗಳು ಇಲ್ಲ. ಇದು ಅವರ ಗಮನ ಸೆಳೆಯುವಂಥಾದ್ದು ಇದೆ.

ಅಧ್ಯಕ್ಷರು: ಮಾನ್ಯ ಮುಖ್ಯಮಂತ್ರಿಗಳು ಇಲ್ಲ, ಆದರೆ ಕಾನೂನು ಮಂತ್ರಿ ಶ್ರೀ ಚಂದ್ರೇಗೌಡ ಅವರು ಇದ್ದಾರೆ. ನೀವು ಹೇಳಿ.

**ಇ) ಸರ್ಕಾರದ ವಿವಿಧ ಇಲಾಖೆಗಳಲ್ಲಿ ''ಸಿ'' ಗುಂಪಿನ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವವರನ್ನು ಖಾಯಂ ಗೊಳಿಸುವ ಬಗ್ಗೆ.**

ಶ್ರೀ ಜಗದೀಶ ಶೆಟ್ಟರ್(ವಿರೋಧ ಪಕ್ಷದ ನಾಯಕರು): ಮಾನ್ಯ ಅಧ್ಯಕ್ಷರೇ, ಸರ್ಕಾರದ ವಿವಿಧ ಇಲಾಖೆಗಳಲ್ಲಿ 'ಸಿ' ಗುಂಪಿನ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವವರನ್ನು ಇದುವರೆಗೂ ಖಾಯಂಗೊಳಿಸಿಲ್ಲ. ಅವರನ್ನು ಖಾಯಂಗೊಳಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನವನ್ನು ಸೆಳೆಯುತ್ತಿದ್ದೇನೆ.